**All India Radio: Bangalore**
**National Bulletin In Kannada**
**27.02.2025  13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**27.02.2025  13.10 p.m.**

**<><><><>**

ಮುಖ್ಯಾಂಶಗಳು

1. ಮಹಾಕುಂಭಮೇಳ ಏಕತೆಯ ಮಹಾಯಜ್ಞ - ಪ್ರಧಾನಿ ನರೇಂದ್ರ ಮೋದಿ ಶ್ಲಾಘನೆ
2. ಏಕತಾ ಪ್ರತಿಮೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ; ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರಿಗೆ ಗೌರವ ನಮನ
3. ಮುಂಬೈನಲ್ಲಿ ಮೇ ೧ ರಿಂದ ವೇವ್ಸ್ - ೨೦೨೫
4. ಡಬ್ಲ್ಯೂಪಿಎಲ್ ಕ್ರಿಕೆಟ್: ರಾಯಲ್ ಚಾಲೆಂಜರ್ಸ್ ಬೆಂಗಳೂರು-ಗುಜರಾತ್ ಜೈಂಟ್ಸ್ ಮುಖಾಮುಖಿ
5. ಐಸಿಸಿ ಚಾಂಪಿಯನ್ಸ್ ಟ್ರೋಫಿ ; ಪಾಕಿಸ್ತಾನ ಮತ್ತು ಬಾಂಗ್ಲಾದೇಶ ತಂಡಗಳ ನಡುವೆ ಹಣಾಹಣಿ

<><><><>

ಮಹಾಕುಂಭಮೇಳವು ಏಕತೆಯ ಮಹಾಯಜ್ಞವಾಗಿದೆ ಎಂದು ಶ್ಲಾಘಿಸಿರುವ ಪ್ರಧಾನಿ ನರೇಂದ್ರ ಮೋದಿ, ಭಾರತವು ತನ್ನ ಪರಂಪರೆಯ ಬಗ್ಗೆ ಹೆಮ್ಮೆ ಪಡುತ್ತದೆ ಮತ್ತು ಹೊಸ ಶಕ್ತಿಯೊಂದಿಗೆ ಮುನ್ನಡೆಯುತ್ತದೆ ಎಂದು ಹೇಳಿದ್ದಾರೆ. ಸಾಮಾಜಿಕ ಜಾಲತಾಣದ ತಮ್ಮ ಪೋಸ್ಟ್‌ನಲ್ಲಿ ಅವರು, ಇದು ದೇಶದ ಹೊಸ ಭವಿಷ್ಯವನ್ನು ಬರೆಯಲಿರುವ ಪರಿವರ್ತನೆಯ ಯುಗದ ಆರಂಭವಾಗಿದೆ. ಮಹಾಕುಂಭಮೇಳದಲ್ಲಿ ಭಾಗವಹಿಸಿರುವ ಅಪಾರ ಸಂಖ್ಯೆಯ ಭಕ್ತರು ಕೇವಲ ದಾಖಲೆಯಲ್ಲ. ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯನ್ನು ಬಲಿಷ್ಠವಾಗಿ ಮತ್ತು ಶ್ರೀಮಂತವಾಗಿಡಲು ಶತಮಾನಗಳವರೆಗೆ ಬಲವಾದ ಅಡಿಪಾಯವನ್ನು ಹಾಕಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಮಹಾಕುಂಭಮೇಳವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುವುದಕ್ಕೆ ತೃಪ್ತಿ ವ್ಯಕ್ತಪಡಿಸಿರುವ ಅವರು, ಜನರ ಕಠಿಣ ಪರಿಶ್ರಮ, ಪ್ರಯತ್ನ ಮತ್ತು ದೃಢಸಂಕಲ್ಪಕ್ಕೆ ಧನ್ಯವಾದ ಸಲ್ಲಿಸಿದ್ದಾರೆ.

ಪ್ರಯಾಗ್‌ರಾಜ್‌ನಲ್ಲಿ ಈ ಏಕತೆಯ ಮಹಾಸಭೆಯು ಸಂಪೂರ್ಣ ೪೫ ದಿನಗಳಲ್ಲಿ ೧೪೦ ಕೋಟಿ ನಾಗರಿಕರ ನಂಬಿಕೆಯು ಏಕಕಾಲದಲ್ಲಿ ಈ ಒಂದು ಉತ್ಸವದಲ್ಲಿ ಒಟ್ಟುಗೂಡಿದೆ. ಇದು ನಿಜಕ್ಕೂ ಅಗಾದವಾಗಿದೆ. ಸಮಾಜದ ಪ್ರತಿಯೊಂದು ವಿಭಾಗ ಮತ್ತು ಪ್ರದೇಶದ ಜನರು ಈ ಮಹಾಕುಂಭಮೇಳದಲ್ಲಿ ಒಂದಾಗಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

<><><><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆದ ಮಹಾಕುಂಭಮೇಳಕ್ಕಾಗಿ ೧೬ ಸಾವಿರಕ್ಕೂ ಹೆಚ್ಚು ರೈಲುಗಳು ಕಾರ್ಯಾಚರಣೆ ನಡೆಸಿವೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಪ್ರಯಾಗ್‌ರಾಜ್ ಜಂಕ್ಷನ್‌ನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈಲುಗಳ ಮೂಲಕ ಸುಮಾರು ೪ ಕೋಟಿ ೪೦ ಲಕ್ಷ ಪ್ರಯಾಣಿಕರು ಪ್ರಯಾಗ್‌ರಾಜ್‌ಗೆ ಮತ್ತು ಅಲ್ಲಿಂದ ಬೇರೆ ಸ್ಥಳಗಳಿಗೆ ಪ್ರಯಾಣಿಸಿದ್ದಾರೆ. ಕಳೆದ ಎರಡೂವರೆ ವರ್ಷಗಳಿಂದ ರೈಲ್ವೆ ಇಲಾಖೆ ಮಹಾಕುಂಭಮೇಳಕ್ಕಾಗಿ ಕೆಲಸ ಮಾಡಿದೆ ಎಂದರು. ಸುಮಾರು ೫ ಸಾವಿರ ಕೋಟಿ ರೂಪಾಯಿಗಳನ್ನು ಸರ್ಕಾರ ಹೂಡಿಕೆ ಮಾಡಿದೆ. ಮಹಾಕುಂಭಮೇಳಕ್ಕಾಗಿ ೨೧ಕ್ಕೂ ಹೆಚ್ಚು ಮೇಲ್ಸೇತುವೆಗಳು ಮತ್ತು ಕೆಳಸೇತುವೆಗಳನ್ನು ನಿರ್ಮಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ರೈಲ್ವೆ ಪೊಲೀಸ್, ಮತ್ತು ರೈಲ್ವೆ ರಕ್ಷಣಾಪಡೆ ಸೇರಿದಂತೆ ವಿವಿಧ ಸಂಸ್ಥೆಗಳ ಸಹಯೋಗದಿಂದಾಗಿ ಮಹಾಕುಂಭಮೇಳ ಯಶಸ್ವಿಯಾಗಲು ಸಾಧ್ಯವಾಯಿತು. ಈ ವರ್ಷದ ಮಹಾಕುಂಭಮೇಳವು ಭಾರತದ ನಂಬಿಕೆ ಮತ್ತು ಏಕತೆಯ ಪ್ರತೀಕವಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

ಧ್ವನಿ: ಅಶ್ವಿನಿ ವೈಷ್ಣವ್(೨೪ ಸೆಕೆಂಡ್ಸ್)

<><><><>

ನಾಲ್ಕು ದಿನಗಳ ಗುಜರಾತ್ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ಏಕತಾ ಪ್ರತಿಮೆ ಸ್ಥಳಕ್ಕೆ ಭೇಟಿ ನೀಡಿ, ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿದ್ದಾರೆ. ನಂತರ ರಾಷ್ಟ್ರಪತಿಯವರು ಜಂಗಲ್ ಸಫಾರಿ ಕೈಗೊಂಡು ವೈವಿಧ್ಯಮಯ ವನ್ಯಜೀವಿಗಳನ್ನು ವೀಕ್ಷಿಸಿದರು. ಇದೇ ವೇಳೆ ಅವರು, ಏಕತಾ ನಗರದಲ್ಲಿರುವ ಏಕತಾ ಕೌಶಲ್ಯಾಭಿವೃದ್ಧಿ ಕೇಂದ್ರಕ್ಕೆ ಭೇಟಿ ನೀಡಿ, ತರಬೇತಿ ಪಡೆಯುವವರೊಂದಿಗೆ ಸಂವಾದ ನಡೆಸಿದರು. ನಂತರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಅಹಮದಾಬಾದ್‌ನಲ್ಲಿರುವ

ರಾಷ್ಟ್ರೀಯ ವಿನ್ಯಾಸ ಸಂಸ್ಥೆಯ ೪೪ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಾಳೆ ಗಾಂಧಿನಗರದ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

ವಿಶ್ವ ಧ್ವನಿ-ದೃಶ್ಯ ಮನರಂಜನಾ ಸಮ್ಮೇಳನ 'ವೇವ್ಸ್ ೨೦೨೫' ಮೇ ೧ ರಿಂದ ೪ ರವರಗೆ ಮುಂಬೈನಲ್ಲಿ ನಡೆಯಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ. ವೇವ್ಸ್ ಶೃಂಗಸಭೆಯು ಭಾರತವನ್ನು ಜಾಗತಿಕ ಮಾಧ್ಯಮ ಮತ್ತು ಮನರಂಜನಾ ಕೇಂದ್ರವಾಗಿ ಸ್ಥಾಪಿಸುವ ಪ್ರಮುಖ ಉಪಕ್ರಮವಾಗಿದ್ದು, ಮಾಧ್ಯಮ ಸಿಇಒ ಗಳು, ಮನರಂಜನಾ ವೃತ್ತಿಪರರು ಮತ್ತು ಸೃಜನಶೀಲ ಮನಸ್ಸುಗಳು ಸೇರಿದಂತೆ ಪ್ರಮುಖ ಉದ್ಯಮ ವ್ಯಕ್ತಿಗಳನ್ನು ಒಟ್ಟುಗೂಡಿಸುತ್ತದೆ. ಜಾಗತಿಕ ಮನರಂಜನಾ ವಲಯದಲ್ಲಿ ಸಹಯೋಗ, ಹೂಡಿಕೆ ಮತ್ತು ತಾಂತ್ರಿಕ ಪ್ರಗತಿಯನ್ನು ಬೆಳೆಸುವ ಗುರಿಯನ್ನು ವೇವ್ಸ್ ಶೃಂಗಸಭೆ ಹೊಂದಿದೆ. ಇದು ಅನಿಮೇಷನ್, ಗೇಮಿಂಗ್ ಮತ್ತು ಚಲನಚಿತ್ರ ನಿರ್ಮಾಣದಲ್ಲಿನ ಪ್ರಗತಿಯ ಮೇಲೆ ಕೇಂದ್ರೀಕರಿಸುತ್ತದೆ. ಇದು ಭಾರತೀಯ ಮತ್ತು ಅಂತಾರಾಷ್ಟ್ರೀಯ ಉದ್ಯಮಿಗಳಿಗೆ ಭವಿಷ್ಯದ ಪ್ರವೃತ್ತಿಗಳ ಕುರಿತು ಚರ್ಚಿಸಲು ಮತ್ತು ಹೂಡಿಕೆ ಅವಕಾಶಗಳನ್ನು ಅನ್ವೇಷಿಸಲು ಅವಕಾಶವನ್ನು ಒದಗಿಸುತ್ತದೆ. ಮನರಂಜನಾ ತಂತ್ರಜ್ಞಾನದಲ್ಲಿ ದೇಶವನ್ನು ನಾಯಕನನ್ನಾಗಿ ಮಾಡುವಲ್ಲಿ ವೇವ್ಸ್ ಶೃಂಗಸಭೆಯು ಪ್ರಮುಖ ಪಾತ್ರ ವಹಿಸುವ ನಿರೀಕ್ಷೆಯಿದೆ.

<><><>

ಜಾಗತಿಕವಾಗಿ ಎಲ್ಲಾ ಸವಾಲುಗಳ ಬೆಳವಣಿಗೆಯೊಂದಿಗೆ ಭಾರತ ಮುಂದುವರೆಯುತ್ತಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಮಾಧ್ಯಮ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ಜಾಗತಿಕ ಪೂರೈಕೆ ಸರಪಳಿಯು ಅನೇಕ ಸವಾಲುಗಳನ್ನು ಎದುರಿಸುತ್ತಿದೆ. ಜಾಗತಿಕ ಕ್ರಮವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರಗಳು ನಿರ್ಧರಿಸುವುದಿಲ್ಲ. ನೂತನ ಜಾಗತಿಕ ಕ್ರಮದಲ್ಲಿ ವ್ಯಾಪಾರ ಮತ್ತು ತಂತ್ರಜ್ಞಾನವು ನಿರ್ಣಾಯಕ ಪಾತ್ರ ವಹಿಸುತ್ತದೆ. ಭಾರತ ಇದರಲ್ಲಿ ಭಾಗವಹಿಸಬೇಕಾಗುತ್ತದೆ. ಅಭಿವೃದ್ಧಿ ಹೊಂದಿದ ದೇಶಗಳಿಗೂ ತಂತ್ರಜ್ಞಾನ ಮತ್ತು ಪ್ರತಿಭೆಯ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ಬೆಳೆಯುತ್ತಿರುವ ಮಧ್ಯಮವರ್ಗ, ಬಡವರು ಮತ್ತು ಉದ್ಯಮಶೀಲ ವರ್ಗದ ಆಕಾಂಕ್ಷೆಗಳನ್ನು ಪೂರೈಸಲು ಹಾಗೂ

ಪರಿಹರಿಸಲು ಹಲವು ಮೂಲಭೂತ ಸಮಸ್ಯೆಗಳಿವೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಅಭಿಪ್ರಾಯಪಟ್ಟಿದ್ದಾರೆ.

<><><>

ಯೂರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೇರ್ ಲೇಯೆನ್ ಇಂದಿನಿಂದ ಎರಡು ದಿನಗಳ ಕಾಲ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಭಾರತಕ್ಕೆ ಇದು ಅವರ ೩ನೇ ಭೇಟಿಯಾಗಿದೆ. ಅವರು ಇಂದು ಸಂಜೆ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ಯೂರೋಪಿಯನ್ ಆಯೋಗದ ಅಧ್ಯಕ್ಷರೊಂದಿಗೆ ನಾಳೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ. ೨೦೦೪ರಿಂದ ಭಾರತ ಮತ್ತು ಯೂರೋಪ್ ಕಾರ್ಯತಂತ್ರದ ಪಾಲುದಾರ ದೇಶಗಳಾಗಿವೆ. ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳು ವಿವಿಧ ಕ್ಷೇತ್ರಗಳಲ್ಲಿ ಬಲವಾಗಿದೆ. ಯೂರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೇರ್ ಅವರ ಭಾರತ ಭೇಟಿಯು ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆಯಿದೆ.

<><><>

ಉಕ್ರೇನ್ ಅಧ್ಯಕ್ಷ ವ್ಲೋಡಿಮಿರ್ ಝೆಲೆನ್ಸ್ಕಿ ನಾಳೆ ಅಮೆರಿಕಕ್ಕೆ ಭೇಟಿ ನೀಡಲಿದ್ದಾರೆ ಎಂದು ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಅಮೆರಿಕಕ್ಕೆ ಉಕ್ರೇನ್‌ನ ಅಪರೂಪದ ಖನಿಜಗಳನ್ನು ನೀಡುವ ಬಗ್ಗೆ ಹಾಗೂ ಉಕ್ರೇನ್ ಮತ್ತು ರಷ್ಯಾ ಯುದ್ಧವನ್ನು ಕೊನೆಗೊಳಿಸುವ ಕುರಿತು ವಾಷಿಂಗ್‌ಟನ್ ಡಿಸಿಯಲ್ಲಿರುವ ಶ್ವೇತಭವನದಲ್ಲಿ ನಾಳೆ ಉಭಯ ನಾಯಕರ ನಡುವೆ ಚರ್ಚೆ ನಡೆಯುವ ನಿರೀಕ್ಷೆಯಿದೆ.

<><><>

ನವದೆಹಲಿಯಲ್ಲಿಂದು ಭಾರತೀಯ ಪ್ರಾಣಿ ಕಲ್ಯಾಣ ಮಂಡಳಿಯಿಂದ ಪ್ರಾಣಿ ಮಿತ್ರ ಮತ್ತು ಜೀವ ದಯಾ ಪ್ರಶಸ್ತಿ ಸಮಾರಂಭ ನಡೆಯಲಿದೆ. ಪ್ರಾಣಿ ಕಲ್ಯಾಣ ಮತ್ತು ರಕ್ಷಣೆಗೆ ನೀಡಿದ ಗಮನಾರ್ಹ ಕೊಡುಗೆಗಳಿಗಾಗಿ ಅತ್ಯುತ್ತಮ ವ್ಯಕ್ತಿಗಳು ಹಾಗೂ ಸಂಸ್ಥೆಗಳಿಗೆ ಈ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತದೆ. ಪ್ರಾಣಿ ಮಿತ್ರ ಪ್ರಶಸ್ತಿಯನ್ನು ೫ ಉಪ ವಿಭಾಗಗಳಲ್ಲಿ ನೀಡಲಾಗುತ್ತದೆ. ಅದೇ ರೀತಿ ಜೀವ ದಯಾ ಪ್ರಶಸ್ತಿಯನ್ನು ಮೂರು ಉಪವಿಭಾಗಗಳಲ್ಲಿ ನೀಡಲಾಗುತ್ತದೆ. ಕೇಂದ್ರ

ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಖಾತೆಯ ರಾಜ್ಯ ಸಚಿವರಾದ ಪ್ರೊಫೆಸರ್ ಎಸ್.ಪಿ.ಸಿಂಗ್ ಬಘೇಲ್ ಮತ್ತು ಜಾರ್ಜ್ ಕುರಿಯನ್ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><><>

ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ. ಕಿಶನ್ ರೆಡ್ಡಿ, ನಾಳೆ ಮುಂಬೈನಲ್ಲಿ ನಡೆಯುವ ರೋಡ್ ಶೋ ನಲ್ಲಿ ಭಾಗವಹಿಲಿಸಲಿದ್ದಾರೆ. ಕಲ್ಲಿದ್ದಲು ಸಚಿವಾಲಯ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಕಲ್ಲಿದ್ದಲು ವಲಯದಲ್ಲಿನ ಹೂಡಿಕೆ ಅವಕಾಶಗಳು ಮತ್ತು ಕಲ್ಲಿದ್ದಲು ಗಣಿ ವಾಣಿಜ್ಯ ಹರಾಜನ್ನು ಪ್ರದರ್ಶಿಸಲಾಗುವುದು. ಈ ಕಾರ್ಯಕ್ರಮವು ಪ್ರಮುಖ ಪಾಲುದಾರರು, ಉದ್ಯಮಿಗಳು ಮತ್ತು ಹೂಡಿಕೆದಾರರನ್ನು ಒಟ್ಟುಗೂಡಿಸಿ ಕಲ್ಲಿದ್ದಲು ಗಣಿಗಾರಿಕೆಯಲ್ಲಿ ತಾಂತ್ರಿಕ ಪ್ರಗತಿ ಹಾಗೂ ಉತ್ತಮ ಸುಸ್ಥಿರ ಅಭ್ಯಾಸಗಳನ್ನು ಪ್ರೋತ್ಸಾಹಿಸುತ್ತದೆ. ಈ ರೋಡ್‌ಶೋ ಉದ್ಯಮ ಸಹಯೋಗ ವಲಯದಲ್ಲಿ ಹೂಡಿಕೆಗಳನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದು ಕಲ್ಲಿದ್ದಲು ಸಚಿವಾಲಯ ತಿಳಿಸಿದೆ.

<><><>

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಕ್ರಿಕೆಟ್ ಲೀಗ್- ಡಬ್ಲ್ಯೂಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ. ಇದೇ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ, ಯುಪಿ ವಾರಿಯರ್ಸ್ ತಂಡದ ವಿರುದ್ಧ ೮ ವಿಕೆಟ್‌ಗಳ ಜಯ ಸಾಧಿಸಿದೆ.

<><><>

ಪಾಕಿಸ್ತಾನದ ರಾವಲ್ಪಿಂಡಿಯಲ್ಲಿ ಇಂದು ನಡೆಯಲಿರುವ ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯದಲ್ಲಿ ಆತಿಥೇಯ ಪಾಕಿಸ್ತಾನ ಮತ್ತು ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ೨:೩೦ ಕ್ಕೆ ಆರಂಭವಾಗಲಿದೆ. ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಇಂಗ್ಲೆಂಡ್ ತಂಡದ ವಿರುದ್ಧ ಅಫ್ಘಾನಿಸ್ತಾನ ತಂಡ, ೮ ರನ್‌ಗಳಿಂದ ರೋಚಕ ಜಯ ಸಾಧಿಸಿದೆ.

<><><>

ಮಹಾರಾಷ್ಟ್ರದ ನಾಗ್ಪುರದ ವಿಸಿಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಫೈನಲ್‌ನಲ್ಲಿ ಕೇರಳ ವಿರುದ್ಧ ವಿದರ್ಭ ತಂಡ ಮುಖಾಮುಖಿಯಾಗಿದೆ. ಭೋಜನ ವಿರಾಮದ ವೇಳೆಗೆ ವಿದರ್ಭ ತಂಡ, ೯ ವಿಕೆಟ್ ನಷ್ಟಕ್ಕೆ ೩೭೩ ರನ್ ಮಾಡಿ ಆಡುತ್ತಿದೆ.

<><> **ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು** <><>